**MARCH 3, 2026**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ: ವಿದೇಶದಲ್ಲಿರುವ ಪ್ರತಿಯೊಬ್ಬ ಕನ್ನಡಿಗರ ಸುರಕ್ಷತೆ, ಸರ್ಕಾರದ ಆದ್ಯತೆ– ಮುಖ್ಯಮಂತ್ರಿ ಭರವಸೆ.**

- **ಮಧ್ಯಪ್ರಾಚ್ಯ ದೇಶಗಳಲ್ಲಿ ಯುದ್ಧ ಸಂಘರ್ಷ: ವಿವಿಧ ಜಿಲ್ಲಾಡಳಿತಗಳಿಂದ ಸಹಾಯವಾಣಿ ಆರಂಭ.**

- **ಇರಾನ್–ಇಸ್ರೇಲ್ ಸಂಘರ್ಷ: ವಿದೇಶಗಳಲ್ಲಿರುವ ಕನ್ನಡಿಗರು ಹಾಗೂ ಎಲ್ಲಾ ಭಾರತೀಯರ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧ– ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ.**

- **ಇದೇ 6 ರಿಂದ 27 ರವರೆಗೆ, 14 ದಿನಗಳ ಕಾಲ ರಾಜ್ಯ ವಿಧಾನ ಪರಿಷತ್‌ನ ನೂರ ಐವತ್ತೆಂಟನೆಯ ಮುಂದುವರಿದ ಅಧಿವೇಶನ–ಪರಿಷತ್ ಸಭಾಪತಿಗಳಿಂದ ಮಾಹಿತಿ.**

**ಈಗ ವಾರ್ತೆಗಳ ವಿವರ**

***********

**ಮಧ್ಯಪ್ರಾಚ್ಯ ರಾಷ್ಟ್ರಗಳ ಕೆಲವು ಭಾಗಗಳಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ ಹಿನ್ನೆಲೆ, ವಿದೇಶದಲ್ಲಿರುವ ಪ್ರತಿಯೊಬ್ಬ ಕನ್ನಡಿಗರ ಸುರಕ್ಷತೆ ಮತ್ತು ಯೋಗಕ್ಷೇಮ ಸರ್ಕಾರದ ಆದ್ಯತೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಸಂದೇಶ ಹಂಚಿಕೊಂಡಿರುವ ಅವರು, ವಿದೇಶಾಂಗ ಸಚಿವಾಲಯ, ನಾಗರಿಕ ವಿಮಾನಯಾನ ಸಚಿವಾಲಯ, ಭಾರತೀಯ ರಾಯಭಾರ ಕಚೇರಿಗಳು ಮತ್ತು ದೂತವಾಸ ಕಚೇರಿಗಳೊಂದಿಗೆ ರಾಜ್ಯ ಸರ್ಕಾರ ನಿರಂತರ ಸಂಪರ್ಕದಲ್ಲಿದೆ ಎಂದಿದ್ದಾರೆ. ವಿಮಾನಗಳ ಹಾರಾಟ ಸ್ಥಗಿತಗೊಂಡಿರುವುದರಿಂದ ಸುಮಾರು ನೂರು ಕನ್ನಡಿಗರು ಪ್ರಸ್ತುತ ಯುಎಇ ಹಾಗೂ 9 ಮಂದಿ ಬಹ್ರೇನ್‌ನಲ್ಲಿ ಸಿಲುಕಿಕೊಂಡಿದ್ದಾರೆ. ಸಂಕಷ್ಟಕ್ಕೆ ಸಿಲುಕಿದವರಲ್ಲಿ ಬಳ್ಳಾರಿಯ 32, ಬೆಂಗಳೂರಿನ 25, ದಾವಣಗೆರೆಯ 9, ಕೊಡಗು, ವಿಜಯಪುರ, ಹಾಸನದ ತಲಾ ನಾಲ್ವರು, ಶಿವಮೊಗ್ಗ, ಉಡುಪಿ,**

ರಾಯಚೂರು, ದಕ್ಷಿಣ ಕನ್ನಡ ಜಿಲ್ಲೆಯ ತಲಾ ಮೂವರು ಸೇರಿದಂತೆ ಒಟ್ಟು 109 ಮಂದಿ ಸೇರಿದ್ದಾರೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ.

*******

ಮಧ್ಯಪ್ರಾಚ್ಯ ದೇಶಗಳಲ್ಲಿನ ಯುದ್ಧದಿಂದ ವಿಮಾನಯಾನ ಸೇವೆಯಲ್ಲುಂಟಾಗಿರುವ ಸಮಸ್ಯೆ ನಿವಾರಣೆಗೆ ವಿವಿಧ ಜಿಲ್ಲಾಡಳಿತಗಳು ಸಹಾಯವಾಣಿ ಆರಂಭಿಸಿದ್ದು, ವಿವಿಧ ರಾಷ್ಟ್ರಗಳಲ್ಲಿ ಸಿಲುಕಿಕೊಂಡಿರುವ ಕನ್ನಡಿಗರ ರಕ್ಷಣೆಗೆ ಕ್ರಮ ಕೈಗೊಂಡಿವೆ. ಚಿಕ್ಕಮಗಳೂರು ಜಿಲ್ಲೆಯ ಯಾರಿಗಾದರು ಸಮಸ್ಯೆ ಉಂಟಾಗಿದ್ದರೆ ಅಂತವರ ನೆರವಿಗೆ ಜಿಲ್ಲಾಡಳಿತ ಸಹಾಯವಾಣಿ ಆರಂಭಿಸಿದೆ. ಸಹಾಯವಾಣಿ ಸಂಖ್ಯೆ 08262- 238950, ಅಥವಾ ಟೋಲ್ ಫ್ರಿ ಸಂಖ್ಯೆ–1077 ಕ್ಕೆ ಕರೆ ಮಾಡಿ ಮಾಹಿತಿ ಪಡೆಯಬಹುದು ಈ ಸಂಖ್ಯೆಗಳು ದಿನದ 24 ಗಂಟೆ ಕಾರ್ಯ ನಿರ್ವಹಿಸಲಿವೆ ಎಂದು ಎಂದು ಜಿಲಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ. ಚಾಮರಾಜನಗರ ಜಿಲ್ಲೆಯ ನಿವಾಸಿಗಳು ಅಥವಾ ಅವರ ಸಂಬಂಧಿಕರು ಹೆಚ್ಚಿನ ಮಾಹಿತಿ ಮತ್ತು ಸಹಾಯಕ್ಕಾಗಿ 24 ಗಂಟೆ ಕಾರ್ಯನಿರ್ವಹಿಸುವ ಚಾಮರಾಜನಗರ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರದ ಸಹಾಯವಾಣಿ ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಶ್ರೀರೂಪಾ ತಿಳಿಸಿದ್ದಾರೆ. ವಿಮಾನಯಾನ ವ್ಯತ್ಯಯದಿಂದಾಗಿ ಸಂಕ ಷ್ಟಕ್ಕೆ ಸಿಲುಕಿರುವ ದಾವಣಗೆರೆ ಜಿಲ್ಲೆಯ ನಾಗರಿಕರ ನೆರವಿಗೆ ಜಿಲ್ಲಾಡಳಿತ ಧಾವಿಸಿದ್ದು, ತುರ್ತು ಕಾರ್ಯಾಚರಣೆ ಕೇಂದ್ರವನ್ನು 24 ಗಂಟೆಯೂ ಸಕ್ರಿಯಗೊಳಿಸಲಾಗಿದೆ. ಸಂಕ ಷ್ಟದಲ್ಲಿರುವವರು ಅಥವಾ ಅವರ ಕುಟುಂಬದ ಸದಸ್ಯರು ಮಾಹಿತಿಗಾಗಿ ಜಿಲ್ಲಾ ಸಹಾಯವಾಣಿ ಸಂಖ್ಯೆ: 08192–234034 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಪ್ರಚಲಿತ ಅಸ್ಥಿರ ಪರಿಸ್ಥಿತಿಯಿಂದಾಗಿ ಅಂತರಾಷ್ಟ್ರೀಯ ವಿಮಾನಯಾನ ಸೇವೆಗಳಲ್ಲಿ ಉಂಟಾಗಿರುವ ವ್ಯತ್ಯಯದ ಹಿನ್ನೆಲೆ, ವಿಜಯನಗರ ಜಿಲ್ಲೆಯ ಸಾರ್ವಜನಿಕರ ಹಿತದೃಷ್ಟಿಯಿಂದ ಜಿಲ್ಲಾಡಳಿತ ಸಹಾಯವಾಣಿ ಆರಂಭಿಸಿದೆ. ವಿಜಯನಗರ ಜಿಲ್ಲೆಯ ನಿವಾಸಿಗಳು ಅಥವಾ ಅವರ ಸಂಬಂಧಿಕರು ಹೆಚ್ಚಿನ ಮಾಹಿತಿಗಾಗಿ ಮತ್ತು ಸಹಾಯಕ್ಕಾಗಿ ವಿಜಯನಗರ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ: 08394–295655 ಸಂಪರ್ಕಿಸುವಂತೆ ತಿಳಿಸಿದೆ.

*******

ಇರಾನ್–ಇಸ್ರೇಲ್ ಸಂಘ ರ್ಷದಲ್ಲಿ ಸಿಲುಕಿದ ಕನ್ನಡಿಗರು ಹಾಗೂ ಎಲ್ಲಾ ಭಾರತೀಯರ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಎಲ್ಲಾ ದೇಶಗಳ ರಾಯಭಾರಿಗಳೊಂದಿಗೆ ಮಾತುಕತೆ ನಡೆಸಿದ್ದು, ಎಲ್ಲರನ್ನೂ ಸುರಕ್ಷಿತವಾಗಿ ಕರೆತರಲು ಕ್ರಮ ತೆಗೆದುಕೊಳ್ಳಲಾಗುವುದು ಎಂದರು. ವಿಶ್ವದ ಯಾವುದೇ ಭಾಗದಲ್ಲಿರುವ ಭಾರತೀಯರ ಸುರಕ್ಷತೆ ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ವಿದೇಶಗಳಲ್ಲಿರುವ ಕನ್ನಡಿಗರು ಭಯಬೀತರಾಗುವ ಅಗತ್ಯವಿಲ್ಲ ಎಂದು ಪ್ರಲ್ಹಾದ ಜೋಶಿ ಭರವಸೆ ನೀಡಿದ್ದಾರೆ.

*******

ಇಸ್ರೇಲ್ ಮತ್ತು ಇರಾನ್ ನಡುವೆ ನಡೆಯುತ್ತಿರುವ ಯುದ್ಧದ ಹಿನ್ನೆಲೆಯಲ್ಲಿ ಅಲ್ಲಿರುವ ಕನ್ನಡಿಗರ ರಕ್ಷಣೆಗೆ ರಾಜ್ಯ ಸರ್ಕಾರ ಸರ್ವ ಸನ್ನದ್ಧವಾಗಿದೆ ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಕ ಟದಲ್ಲಿರುವ ಕನ್ನಡಿಗರನ್ನು ಸುರಕ್ಷಿತವಾಗಿ ಕರೆತರಲು ಮುಖ್ಯಮಂತ್ರಿ ಅವರು ಈಗಾಗಲೇ ಅಗತ್ಯ ಕ್ರಮಗಳನ್ನು ಕೈಗೊಂಡಿದ್ದಾರೆ. ಪ್ರಸ್ತುತ ಲಭ್ಯವಿರುವ ಮಾಹಿತಿಯಂತೆ, ಯುದ್ಧ ಪೀಡಿತ ಪ್ರದೇಶಗಳಲ್ಲಿ ಮೈಸೂರು ಮೂಲದವರು ಸಿಲುಕಿರುವ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಲಭ್ಯವಾಗಿಲ್ಲ. ಕನ್ನಡಿಗರ ಸುರಕ್ಷತೆಯ ಬಗ್ಗೆ ಸರ್ಕಾರ ನಿರಂತರ ನಿಗಾ ವಹಿಸಲಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

*******

ರಾಜ್ಯ ವಿಧಾನ ಪರಿ ತ್‌ನ ನೂರ ಐವತ್ತೆಂಟನೆಯ ಮುಂದುವರಿದ ಅಧಿವೇಶನ ಇದೇ 6 ರಿಂದ ಆರಂಭವಾಗಲಿದೆ ಎಂದು ವಿಧಾನ ಪರಿ ತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ರಜಾದಿನಗಳನ್ನು ಹೊರತುಪಡಿಸಿ ಮಾರ್ಚ್ 27 ರವರೆಗೆ, ಒಟ್ಟು 14 ದಿನ ಅಧಿವೇಶನ ನಡೆಯಲಿದೆ. ಮಾರ್ಚ್ 6 ಮುಖ್ಯಮಂತ್ರಿ ಅವರು 2026-27ನೇ ಸಾಲಿನ ರಾಜ್ಯದ ಆಯವ್ಯಯವನ್ನು ಮಂಡಸಲಿದ್ದಾರೆ ಎಂದರು. ಅಧಿವೇಶನದಲ್ಲಿ ಶಾಸನ ರಚನೆ–ವಿಧೇಯಕಗಳ ಮಂಡನೆ, ಪರ್ಯಾಲೋಚನೆ ಹಾಗೂ ಅಂಗೀಕಾರ, ಅಧಿಕೃತ ನಿರ್ಣಯಗಳು, ಸೇರಿದಂತೆ ಕಾರ್ಯಕಲಾಪಗಳ ಸಲಹಾ ಸಮಿತಿಯ ತೀರ್ಮಾನದಂತೆ ಇನ್ನಿತರೆ ವಿ ಯಗಳ ಮೇಲೆ ಚರ್ಚೆಗಳು ನಡೆಯಲಿವೆ ಎಂದು ಬಸವರಾಜ ಹೊರಟ್ಟಿ ತಿಳಿಸಿದರು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–42 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ರಾಜ್ಯಾದ್ಯಂತ ಇಂದು ಹೋಳಿ ಹುಣ್ಣಿಮೆಯನ್ನು ಸಂಭ್ರಮದಿಂದ ಆಚರಿಸಲಾಗುತ್ತದೆ. ಇಂದು ಕಾಮ–ರತಿಯರ ಮೂರ್ತಿ ಪ್ರತಿಷ್ಠಾಪನೆ ಮಾಡಿ ಪೂಜೆ ಸಲ್ಲಿಸಲಾಗುತ್ತದೆ. ಈ ಬಾರಿ ಹುಣ್ಣಿಮೆಯಂದು ಗ್ರಹಣ ಬಂದಿರುವುದರಿಂದ ಮರುದಿನ ಬಣ್ಣದೋಕುಳಿ ನಡೆಯಲಿದೆ. ಉತ್ತರ ಕರ್ನಾಟಕದಲ್ಲಿ ಹುಣ್ಣಿಮೆಯಿಂದ 5 ದಿನಗಳ ಕಾಲ ಅಂದರೆ ರಂಗಪಂಚಮಿಯವರೆಗೆ ಬಣ್ಣ ಆಡಲಾಗುತ್ತದೆ. ಉತ್ತರ ಭಾರತದಲ್ಲಿ ಕೃಷ್ಣ ರಾಧೆಯರ ಪವಿತ್ರ ಪ್ರೇಮದ ಸಂಕೇತವಾಗಿ ಬರ್ಣಣ ಆಡಲಾಗುತ್ತದೆ. ಈ ಹಬ್ಬದ ಸಂದರ್ಭದಲ್ಲಿ ಬೀದಿ, ಬೀದಿಗಳಲ್ಲಿ ಬಣ್ಣದ ಲೋಕವೇ ಸೃಷ್ಟಿಯಾಗುತ್ತದೆ. ಹುಬ್ಬಳ್ಳಿ ಧಾರವಾಡದಲ್ಲೂ ಹೋಳಿ ಹಬ್ಬದ

ಸಿದ್ಧತೆಗಳು ಆರಂಭಗೊಂಡಿದ್ದು, ರತಿ ಕಾಮಣ್ಣರ ಪ್ರತಿಷ್ಠಾಪನೆಗೆ ಕ್ಷಣ ಗಣನೆ ಆರಂಭಗೊಂಡಿದೆ. ಅವಳಿ ನಗರದಲ್ಲಿ 300 ಕ್ಕೂ ಹೆಚ್ಚು ಕಡೆ ರತಿ ಮನ್ಮಥರ ಮೂರ್ತಿ ಪ್ರತಿಷ್ಠಾಪಿಸಲಾಗುತ್ತಿದೆ.

*******

ರಾಜ್ಯದಲ್ಲಿ, ಬರುವ ಏಪ್ರಿಲ್ ತಿಂಗಳಲ್ಲಿ, ಮತದಾರರ ಪಟ್ಟಿಯ ವಿಶೇ ಷ ತೀವ್ರ ಪರಿ ಷ್ಕರಣೆ ನಡೆಸಲು ಭಾರತ ಚುನಾವಣಾ ಆಯೋಗ ಉದ್ದೇಶಿಸಿದ್ದು, ಅದರ ಪೂರ್ವಸಿದ್ಧತೆಯ ಭಾಗವಾಗಿ, ವಿಜಯನಗರ ಜಿಲ್ಲೆಯಲ್ಲಿ 2012 ರ ಮತದಾರರ ಪಟ್ಟಿಗೆ, 2025 ರ ಮತದಾರರ ಪಟ್ಟಿಯ, ಮ್ಯಾಪಿಂಗ್ ಕಾರ್ಯ ನಡೆಯುತ್ತಿದೆ. ಸಾರ್ವಜನಿಕರು ಮ್ಯಾಪಿಂಗ್ ಕಾರ್ಯಕ್ಕೆ ಅಗತ್ಯವಾದ ಮಾಹಿತಿಗಳನ್ನು ಒದಗಿಸಿ, ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಸಹರಿಸುವಂತೆ ವಿಜಯನಗರ ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ಆಕಾಶವಾಣಿಯ ಮೂಲಕ ಮನವಿ ಮಾಡಿದ್ದಾರೆ.

ಧ್ವನಿ–ಕವಿತಾ ಮನ್ನಿಕೇರಿ–35 ಸೆಕೆಂಡ್ಸ್

*******

ಜನಗಣತಿ ಕಾರ್ಯ ರಾ ಷ್ಟ್ರದ ಅತ್ಯಂತ ಪ್ರಮುಖ ಮತ್ತು ಬೃಹತ್ ಕಾರ್ಯಕ್ರಮವಾಗಿದ್ದು, ಈ ಕಾರ್ಯಕ್ಕೆ ನಿಯೋಜಿಸಿರುವ ಜಿಲ್ಲೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಅತ್ಯಂತ ಜವಾಬ್ದಾರಿಯಿಂದ ತಮ್ಮ ಕರ್ತವ್ಯ ನಿರ್ವಹಿಸುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ ಕುಮಾರ ನಿರ್ದೇಶನ ನೀಡಿದ್ದಾರೆ. ಮಂಡ್ಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜನಗಣತಿ ಕಾರ್ಯದ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಆಯೋಜಿಸಿದ್ದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ದೇಶದಲ್ಲಿ ಅತ್ಯಂತ ತಳಮಟ್ಟದಿಂದ ಮಾಹಿತಿ ಸಂಗ್ರಹಿಸುವ ಏಕೈಕ ಕಾರ್ಯಕ್ರಮ ಇದಾಗಿದ್ದು, ಮುಂದಿನ 10 ವ ರ್ಷಗಳ ಕಾಲ ದೇಶದ ಅಭಿವೃದ್ಧಿ ಯೋಜನೆಗಳನ್ನು ರೂಪಿಸಲು ಈ ದಾಖಲೆ ಬಳಕೆಯಾಗಲಿದೆ ಎಂದರು.

*******

ಕಲಬುರಗಿಯಲ್ಲಿ ಐಟಿಎಫ್‌ಡಬ್ಲ್ಯು ಅಂತರಾಷ್ಟ್ರೀಯ ಮಹಿಳಾ ಟೆನಿಸ್ ಟೂರ್ನಿ ಇಂದಿನಿಂದ ಆರಂಭಗೊಳ್ಳಲಿದೆ. ಭಾರತ ಸೇರಿದಂತೆ 11 ದೇಶಗಳ ಆಟಗಾರ್ತಿಯರು ಟೂರ್ನಿಯಲ್ಲಿ ಪಾಲ್ಗೊಳ್ಳಲಿದ್ದು, ಇಂದು ನಡೆಯಲಿರುವ ಪ್ರಧಾನ ಸುತ್ತಿನ ಸಿಂಗಲ್ಸ್ ವಿಭಾಗದ ಹಣಾಹಣಿಯಲ್ಲಿ ನೆದರ್ಲ್ಯಾಂಡ್ಸ್‌ನ ಯಾಸ್ಮಿನ್ ಜಿಂಬ್ರೆ ಮತ್ತು ಐಶ್ವರ್ಯಾ ಜಾಧವ ನಡುವೆ ಸ್ಪರ್ಧೆ ನಡೆಯಲಿದೆ. ಸಿಂಗಲ್ಸ್ ವಿಭಾಗದಲ್ಲಿ 32 ಮತ್ತು ಡಬಲ್ಸ್‌ನಲ್ಲಿ 16 ಆಟಗಾರ್ತಿಯರು ಕಣದಲ್ಲಿದ್ದಾರೆ. ಮಾರ್ಚ 8 ರಂದು ಫೈನಲ್ ಪಂದ್ಯ ನಡೆಯಲಿದೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಮಧ್ಯಪ್ರಾಚ್ಯ ರಾ ್ಟ್ರಗಳಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ: ವಿದೇಶದಲ್ಲಿರುವ ಪ್ರತಿಯೊಬ್ಬ ಕನ್ನಡಿಗರ ಸುರಕ್ಷತೆ, ಸರ್ಕಾರದ ಆದ್ಯತೆ- ಮುಖ್ಯಮಂತ್ರಿ ಭರವಸೆ.

ಮಧ್ಯಪ್ರಾಚ್ಯ ದೇಶಗಳಲ್ಲಿ ಯುದ್ಧ ಸಂಘ ´೯: ವಿವಿಧ ಜಿಲ್ಲಾಡಳಿತಗಳಿಂದ ಸಹಾಯವಾಣಿ ಆರಂಭ.

ಇರಾನ್-ಇಸ್ರೇಲ್ ಸಂಘ ´೯: ವಿದೇಶಗಳಲ್ಲಿರುವ ಕನ್ನಡಿಗರು ಹಾಗೂ ಎಲ್ಲಾ ಭಾರತೀಯರ ರಕ್ಷಣೆಗೆ ಕೇಂದ್ರ ಸರ್ಕಾರ ಬದ್ಧ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ.

ಇದೇ **6** ರಿಂದ **27** ರವರೆಗೆ, **14** ದಿನಗಳ ಕಾಲ ರಾಜ್ಯ ವಿಧಾನ ಪರಿ ´ತ್‌ನ ನೂರ ಐವತ್ತೆಂಟನೆಯ ಮುಂದುವರಿದ ಅಧಿವೇಶನ-ಪರಿಷತ್ ಸಭಾಪತಿಗಳಿಂದ ಮಾಹಿತಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ **7** ಗಂಟೆ **35** ನಿಮಿಷಕ್ಕೆ

********